3. ರಫ್ತು ಹೆಚ್ಚಿಸಿದ ಉದ್ದೇಶದಿಂದ ಸಾಗಣಿಕ ವೆಚ್ಚವನ್ನು ಕೇಂದ್ರ ಸರ್ಕಾರ ಭರಿಸುತ್ತದೆ.

ಈ ಮೇಲಿನ ಕೇಂದ್ರ ಸರ್ಕಾರದ ಕ್ರಮಗಳು ಸಕ್ಕರೆ ಕಾರ್ಖಾನೆಗಳಲ್ಲಿನ ಸಕ್ಕರೆಯ ದಾಸ್ತಾನು ಕಡಿಮೆ ಮಾಡುವಲ್ಲಿ ಸಹಾಯಕವಾಗಬಹುದಾಗಿದೆ.

ರಾಜ್ಯದಲ್ಲಿ ಮುರಾರ್ಜಿ ದೇಸಾಯಿ ವಸತಿ ಶಾಲೆಗಳು

3142 (3789) : ಶ್ರೀ ಎ. ಕೃಷ್ಣಪ್ಪ : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದ ವಿವಿಧ ತಾಲ್ಲೂಕುಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುತ್ತಿರುವ ಮುರಾರ್ಜಿ ದೇಸಾಯಿ ವಸತಿಶಾಲೆಗಳ ಸಂಖ್ಯೆ ಎಷ್ಟು?

ಆ) ಇವುಗಳಲ್ಲಿ ಎಷ್ಟು ಶಾಲೆಗಳಿಗೆ ಕಟ್ಟಡ ನಿರ್ಮಾಣ ಮಾಡಲಾಗಿದೆ?

ಇ) ಈ ಎಲ್ಲಾ ಶಾಲೆಗಳಲ್ಲಿಯೂ ಅಗತ್ಯವಿರುವ ಸಿಬ್ಬಂದಿ ಮತ್ತು ಶಿಕ್ಷಕರ ನೇಮಕ ಆಗಿದೆಯೇ?

ಈ) ಆಗದಿದ್ದಲ್ಲಿ, ಯಾವಾಗ ಮಾಡಲಾಗುವುದು; ವಿವರಗಳನ್ನು ಕೊಡುವುದು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

ಅ) 80

ಆ) 62 ಕಟ್ಟಡಗಳ ಕಾಮಗಾರಿಯನ್ನು ಕೈಗೊಂಡಿದ್ದು, ಇದರಲ್ಲಿ 30 ಕಟ್ಟಡಗಳ ಕಾಮಗಾರಿಯು ಪೂರ್ಣಗೊಂಡಿದೆ. ಇದರಲ್ಲಿ 17 ವಸತಿ ಶಾಲೆಗಳು ಸ್ವಂತ ಕಟ್ಟಡಗಳಲ್ಲಿ ನಡೆಯುತ್ತಿವೆ.

ಇ) ಅ) 640 ವಿವಿಧ ವಿಷಯ ಭೋಧಕರ ಹುದ್ದೆ ಮಂಜೂರಾಗಿದ್ದು, ಇದರಲ್ಲಿ 524 ಬೋಧಕ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ.

ಆ) 781 ಬೋಧಕೇತರ ಹುದ್ದೆಗಳು ಮಂಜೂರಾಗಿದ್ದು, ಇವುಗಳ ಪೈಕಿ 346 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ.

ಶೀಘ್ರದಲ್ಲೇ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗುವುದು.

"ಲಿಂಗಾಯಿತ" ಸಮುದಾಯವನ್ನು ಹಿಂದುಳಿದ ವರ್ಗಗಳ ಪಟ್ಟಿಗೆ ಸೇರ್ಪಡೆ

3143 (3457) : ಶ್ರೀ ಸೋಮಣ್ಣ ಏ (ಬಿನ್ನಿಪೇಟೆ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಲಿಂಗಾಯಿತ ಸಮುದಾಯದ ಸರಾಸರಿ ಜನಸಂಖ್ಯೆ ಎಷ್ಟು;

ಆ) ರಾಜ್ಯದಲ್ಲಿರುವ ಬಹುತೇಕ ಲಿಂಗಾಯಿತ ಸಮುದಾಯವು ಬಡತನದ ರೇಖೆಗಿಂತ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಇ) ರಾಜ್ಯದಲ್ಲಿರುವ ಲಿಂಗಾಯಿತ ಸಮುದಾಯವನ್ನು ಹಿಂದುಳಿದ ಜಾತಿಗಳ ಪಟ್ಟಿಗೆ ಸೇರಿಸಲು ರಾಜ್ಯ ಸರ್ಕಾರವು ಕೇಂದ್ರಕ್ಕೆ ಪ್ರಸ್ತಾವನೆಯನ್ನು ಕಳುಹಿಸಿದೆಯೇ;

ಈ) ಹಾಗಿದ್ದಲ್ಲಿ, ಯಾವಾಗ ಪ್ರಸ್ತಾವನೆಯನ್ನು ಸಲ್ಲಿಸಲಾಯಿತು;

ಉ) ಕೇಂದ್ರ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಜನಸಂಖ್ಯೆಯ ಪೂರ್ಣ ಸಮೀಕ್ಷೆ ಅಥವಾ ಜನಗಣತಿಯಾಗದೇ ಇರುವುದರಿಂದ ಯಾವುದೇ ಜಾತಿಯ ನಿಖರವಾದ ಜನಸಂಖ್ಯೆಯ ಮಾಹಿತಿ ಲಭ್ಯವಿರುವುದಿಲ್ಲ. ರಾಜ್ಯದಲ್ಲಿ ಈ ವರ್ಗದ ಜನಸಂಖ್ಯೆಯು ಒಟ್ಟು ಜನಸಂಖ್ಯೆಯ ಶೇಕಡಾ 15.33 ಎಂದು ಓ. ಚಿನ್ನಪ್ಪರೆಡ್ಡಿ ಆಯೋಗದ ವರದಿಯಲ್ಲಿ ಅಂದಾಯ ಮಾಡಲಾಗಿದೆ.

ಆ) ಇಂತಹ ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ

ಉ) ಉದ್ಭವಿಸುವುದಿಲ್ಲ.

ಬೆಂಗಳೂರು ನಗರದ ಮಿ.ಜಿ ರಸ್ತೆಯಲ್ಲಿರುವ ಸರ್ಕಾರಿ ವಿದ್ಯಾರ್ಥಿ ನಿಲಯವನ್ನು ಖಾಸಗಿಯವರಿಗೆ ವಹಿಸುವುದು

3144 (3618) : ಶ್ರೀ ಸೋಮಶೇಖರ್ ಬಿ (ಮಳವಳ್ಳಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು ನಗರದ ಎಂ.ಜಿ ರಸ್ತೆಯಲ್ಲಿರುವ ಸಮಾಜ ಕಲ್ಯಾಣ ಇಲಾಖೆ ನಡೆಸುತ್ತಿರುವ ಸರ್ಕಾರಿ ವಿಜ್ಞಾನ ಕಾಲೇಜಿನ ವಿದ್ಯಾರ್ಥಿನಿಲಯವನ್ನು ಸರ್ಕಾರದಿಂದ ಖಾಸಗಿಯವರಿಗೆ ವಹಿಸಿರುವುದು ನಿಜವೇ?

ಆ) ವಹಿಸಿದ್ದಲ್ಲಿ, ಯಾವ ಆಧಾರದ ಮೇಲೆ ವಹಿಸಲಾಗಿದೆ: ವಿವರಗಳನ್ನು ನೀಡುವುದು:

ಇ) ಇದರಿಂದ ಪರಿಶಿಷ್ಟ ಜಾತಿ / ವರ್ಗಗಳ ವಿದ್ಯಾರ್ಥಿಗಳಿಗೆ ಸ್ಥಳಾವಕಾಶದ ಕೊರತೆಯಾಗುವುದಿಲ್ಲವೇ?

ಈ) ಈ ಕೊರತೆಯನ್ನು ನೀಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಉ) ಈ ಹಿಂದೆ ಇದ್ದ ವಿದ್ಯಾರ್ಥಿಗಳ ಸಂಖ್ಯೆಯನ್ನು ಕಡಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಊ) ಹಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು?

ಋ) ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು: ವಿವರಗಳನ್ನು ನೀಡುವುದು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಇಲ್ಲ

ಆ) ಅನ್ವಯಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ

ಉ) ಕಡಿತಗೊಳಿಸಿರುವುದಿಲ್ಲ